# ಕರ್ನಾಟಕ ಲೋಕಸೇವಾ ಆಯೋಗ

**"ಉದ್ಯೋಗ ಸೌಧ" ಬೆಂಗಳೂರು–560 001.**

**ಸಂಖ್ಯೆ: ಇ(1)1485/2016–17/ಪಿಎಸ್‌ಸಿ** **ದಿನಾಂಕ:08–06–2016**

## ಅಧಿಸೂಚನೆ

1. ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) ನಿಯಮಗಳು 2003 ಮತ್ತು ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2012ರನ್ವಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿ ಖಾಲಿ ಇರುವ ಗ್ರೂಪ್–'ಎ' ವೃಂದದ 25 ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗಳ ಆಯ್ಕೆ ಸಲುವಾಗಿ ಅಭ್ಯರ್ಥಿಗಳನ್ನು 02 ವರ್ಷಗಳ ಡಿಪ್ಲೋಮಾ ಕೋರ್ಸ್ ಇನ್ ಫಾರೆಸ್ಟ್ರಿ ತರಬೇತಿಗಾಗಿ ಆಯ್ಕೆ ಮಾಡಲು ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ **ON-LINE** ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

> **ವಿಶೇಷ ಸೂಚನೆ:– ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅಧಿಸೂಚನೆಯ ಅನುಬಂಧ–1ರಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು.**

2. (1) **ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ:09–06–2016**
   (2) **ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:08–07–2016ರ ರಾತ್ರಿ 11:45**
   (3) **ಪೂರ್ವಭಾವಿ ಪರೀಕ್ಷೆಯ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ:09–07–2016ರ ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ ಮಾತ್ರ.**

**ಪೂರ್ವಭಾವಿ ಪರೀಕ್ಷೆಯನ್ನು ನಡೆಸುವ ದಿನಾಂಕವನ್ನು ನಂತರದಲ್ಲಿ ಪ್ರಕಟಿಸಲಾಗುವುದು.**

ಪೂರ್ವಭಾವಿ ಪರೀಕ್ಷೆಯ ಅರ್ಜಿಗಳನ್ನು **ON LINE** ಮೂಲಕ ಭರ್ತಿ ಮಾಡಿ **ಪರೀಕ್ಷಾ ಶುಲ್ಕವನ್ನು ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ ಕರ್ನಾಟಕ ರಾಜ್ಯದ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (Computerised Post Offices Only) ಮಾತ್ರ ಸಂದಾಯ ಮಾಡಬಹುದಾಗಿರುತ್ತದೆ.** ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. **ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in"ನಲ್ಲಿ ಬಿತ್ತರಿಸಲಾಗಿದೆ.**

3. **ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆ ಆನ್–ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು.**

ಆನ್–ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿಯಾಗಲಿ ನ್ಯೂನ್ಯತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಸೂಚನೆಗಳನ್ನು ಹಂತ ಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

**<u>ಹಂತ 1</u>:–** ಅಭ್ಯರ್ಥಿಗಳು ಆಯೋಗದ ಅಧಿಕೃತ ವೆಬ್‌ಸೈಟ್ **http://kpsc.kar.nic.in** ಅನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **'Application For Assistant Conservator of Forests Preliminary Examination-2016** ಎಂದು ಮೂಡುತ್ತದೆ ಮತ್ತು ಅಧಿಸೂಚನೆ/ಪರೀಕ್ಷಾ ವಿದ್ಯಾರ್ಹತೆ ವಿವರಗಳು ಲಭ್ಯವಾಗಲಿದ್ದು, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮುನ್ನ ಅಧಿಸೂಚನೆಯಲ್ಲಿನ ಎಲ್ಲಾ ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ತಪ್ಪದೇ ಓದತಕ್ಕದ್ದು. ನಂತರ ನಿಯಮ ಮತ್ತು ಷರತ್ತುಗಳನ್ನು ಓದಿಕೊಂಡು ಕೆಳಗಿನ ಚೆಕ್‌ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು.

**<u>ಹಂತ 2</u>:–** ಮೊದಲ ಬಾರಿಗೆ ನೀವು ಲಾಗ್–ಇನ್ ಆಗುತ್ತಿದ್ದಲ್ಲಿ, New Registration link ಮೇಲೆ ಕ್ಲಿಕ್ ಮಾಡಿ ನೋಂದಣಿ (Register) ಮಾಡಿಕೊಳ್ಳತಕ್ಕದ್ದು.

**<u>ಹಂತ 3</u>:–** ನೋಂದಣಿ (Register) ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಈ ಎಲ್ಲಾ ಮಾಹಿತಿಗಳನ್ನು ಒದಗಿಸತಕ್ಕದ್ದು, ಪೂರ್ಣ ಹೆಸರು (ಎಸ್‌ಎಸ್‌ಎಲ್‌ಸಿ/10ನೇ ತರಗತಿಯ ಅಂಕಪಟ್ಟಿಯಲ್ಲಿರುವಂತೆ), ತಂದೆಯ ಹೆಸರು, ತಾಯಿಯ ಹೆಸರು, ಪತಿ/ಪತ್ನಿಯ ಹೆಸರು, ಲಿಂಗ, ಜನ್ಮ ದಿನಾಂಕ, ಇ–ಮೇಲ್ ಐ.ಡಿ. (ಮಿಂಚಂಚೆ) ಮತ್ತು ಮೊಬೈಲ್ ನಂಬರ್ (10 ಅಂಕಿಗಳು).

**<u>ಹಂತ 4</u>:–** ಮೇಲ್ಕಂಡ ಮಾಹಿತಿಗಳನ್ನು ನೊಂದಾಯಿಸಿದ ನಂತರ, ನಿಮ್ಮ Login ID ಮತ್ತು Password ಅನ್ನು ನಿಮ್ಮ ಇ–ಮೇಲ್‌ಗೆ ರವಾನಿಸಲಾಗಿರುತ್ತದೆ. Login pageನಲ್ಲಿ ಅವುಗಳನ್ನು ಉಪಯೋಗಿಸಿ ಮುಂದಿನ ಅಂದರೆ ಅರ್ಜಿಯನ್ನು ಭರ್ತಿ ಮಾಡುವ ಮತ್ತು ಸಲ್ಲಿಸುವ ಕಾರ್ಯಗಳನ್ನು ಮಾಡತಕ್ಕದ್ದು. ಅಭ್ಯರ್ಥಿಗಳು, ಈಗಾಗಲೇ ನೋಂದಣಿ ಮಾಡಿಕೊಂಡಿದ್ದು, Passwordಅನ್ನು ಕಳೆದುಕೊಂಡಿದ್ದಲ್ಲಿ, Forgot Password Buttonಅನ್ನು ಕ್ಲಿಕ್ ಮಾಡಿ, ಸಂಬಂಧಿತ ವಿವರಗಳನ್ನು ಭರ್ತಿ ಮಾಡಿದ ನಂತರ ಇ–ಮೇಲ್ ಮುಖಾಂತರ Passwordಅನ್ನು ಪಡೆದುಕೊಳ್ಳಬಹುದಾಗಿರುತ್ತದೆ.

**<u>ಹಂತ 5</u>:–** Login ID ಮತ್ತು Password ದೊರಕಿದ್ದಲ್ಲಿ Login pageಗೆ ಹೋಗಿ Login ID ಮತ್ತು Passwordಅನ್ನು ನಮೂದಿಸಿ, Login Buttonಅನ್ನು ಕ್ಲಿಕ್ ಮಾಡಿದಲ್ಲಿ, ಅಭ್ಯರ್ಥಿಗಳ ಸ್ವ–ವಿವರಗಳು ಅಭ್ಯರ್ಥಿಗಳ ಅನುಕೂಲಕ್ಕಾಗಿ ಪರದೆಯ ಮೇಲೆ ಮೂಡುತ್ತದೆ.

**<u>ಹಂತ 6</u>:–** ಈಗಾಗಲೇ ಭರ್ತಿ ಮಾಡಲಾದ ಸ್ವವಿವರಗಳೊಂದಿಗೆ ಅರ್ಜಿಯಲ್ಲಿ ಕಡ್ಡಾಯವಾಗಿ ನೀಡಬೇಕಿರುವ ಇತರೆ ಮಾಹಿತಿಗಳನ್ನು ನೀಡಿ, ಅರ್ಜಿ ಭರ್ತಿ ಮಾಡುವ ಕಾರ್ಯವನ್ನು ಪೂರ್ಣಗೊಳಿಸತಕ್ಕದ್ದು. ಅವಶ್ಯವಿದ್ದಲ್ಲಿ ಅರ್ಜಿಯನ್ನು Edit ಮಾಡಿ, ಈಗಾಗಲೇ ನಮೂದಿಸಿರುವ ಮಾಹಿತಿಯಲ್ಲಿ ಬದಲಾವಣೆಯನ್ನು ಮಾಡಬಹುದು. ಕಡ್ಡಾಯವಾಗಿ ನೀಡಬೇಕಿರುವ ದಾಖಲೆಗಳನ್ನು ಅಂದರೆ ಭಾವಚಿತ್ರ (Photograph), ಸಹಿ (Signature), ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಮತ್ತು ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು JPEG/JPG/PDF Formatನಲ್ಲಿ upload ಮಾಡತಕ್ಕದ್ದು.

*<u>**ಟಿಪ್ಪಣಿ:–**</u> ಅರ್ಜಿಯನ್ನು ಸ್ಪಷ್ಟವಾಗಿ ಭರ್ತಿ ಮಾಡಲು ಸೂಚನೆಗಳು ಹಾಗೂ ಪ್ರಮುಖ linkಗಳು ಮಾರ್ಗದರ್ಶನ ನೀಡುತ್ತದೆ. ಆದ್ದರಿಂದ ಕಾಲ ಕಾಲಕ್ಕೆ ಪರದೆಯ ಮೇಲೆ ಮೂಡುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು.*

**<u>ಹಂತ 7</u>:–** ಅರ್ಜಿಯನ್ನು ಭರ್ತಿ ಮಾಡಿದ ನಂತರ ಅರ್ಜಿಯ Preview ಅನ್ನು ನೋಡಿ, ಎಲ್ಲಾ ಮಾಹಿತಿಗಳು ಸರಿಯಾಗಿರುವ ಕುರಿತು ಖಚಿತಪಡಿಸಿಕೊಂಡ ನಂತರವೇ ಅರ್ಜಿಯನ್ನು ಸಲ್ಲಿಸತಕ್ಕದ್ದು.

*<u>**ಟಿಪ್ಪಣಿ:–**</u> ಅಂತಿಮವಾಗಿ Final Submit Button ಅನ್ನು ಒತ್ತಿದ ನಂತರ ಅರ್ಜಿಯಲ್ಲಿ ಅಭ್ಯರ್ಥಿಗಳು ಯಾವುದೇ ರೀತಿಯ ಬದಲಾವಣೆಗಳನ್ನು ಮಾಡಲು ಅವಕಾಶವಿರುವುದಿಲ್ಲ.*

**<u>ಹಂತ 8</u>:–** Download Challan Buttonಅನ್ನು ಒತ್ತಿ, Challanನ ಪ್ರತಿಯನ್ನು print-out ತೆಗೆದುಕೊಂಡು ಹತ್ತಿರದ E-payment ಅಂಚೆ ಕಛೇರಿಗಳಲ್ಲಿ ನಿಗದಿತ ಶುಲ್ಕವನ್ನು ಪಾವತಿ ಮಾಡತಕ್ಕದ್ದು. (D.D/Postal Order/ Money Ordersಗಳನ್ನು ಆಯೋಗವು ಸ್ವೀಕರಿಸುವುದಿಲ್ಲ). ನಿಗದಿತ ಶುಲ್ಕ ಪಾವತಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**<u>ಹಂತ 9</u>:–** ಶುಲ್ಕ ಪಾವತಿಯಾಗಿರುವ ಬಗ್ಗೆ ಮಾಹಿತಿಯನ್ನು ಪಡೆದುಕೊಳ್ಳಬೇಕಾದಲ್ಲಿ, www.Karnatakapost.gov.in ವೆಬ್‌ಸೈಟ್‌ಗೆ ಹೋಗಿ ಎರಡು (2) ದಿನಗಳ ನಂತರ ಮಾಹಿತಿ ಪಡೆದುಕೊಳ್ಳಬಹುದು.

**ಅರ್ಜಿಯ ಪ್ರತಿಯನ್ನು ಮತ್ತು ಶುಲ್ಕ ಸಂದಾಯ ಮಾಡಿದ ಚಲನ್/ವಿವರಗಳನ್ನು ಕಡ್ಡಾಯವಾಗಿ ಅಭ್ಯರ್ಥಿಗಳು ತಮ್ಮೊಂದಿಗೆ ಇಟ್ಟುಕೊಳ್ಳತಕ್ಕದ್ದು ಹಾಗೂ ಆಯೋಗವು ಅಪೇಕ್ಷಿಸಿದಾಗ ಈ ಚಲನ್/ವಿವರಗಳನ್ನು ಹಾಜರುಪಡಿಸತಕ್ಕದ್ದು.**

4.1 **ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಸರಿಯಾದ ಮಿಂಚಂಚೆ (ಇ–ಮೇಲ್) ವಿಳಾಸವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.**

4.2 ಅಂತಿಮ ಕ್ಷಣಗಳಲ್ಲಿ ಅರ್ಜಿ ಸಲ್ಲಿಸಲು ಎದುರಾಗಬಹುದಾದ ತೊಡಕುಗಳಿಂದ ಪಾರಾಗಲು ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

4.3 ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ/ಸಮಯದ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. **ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಯಾವುದೇ ಮಾಹಿತಿ ನೀಡದೆ ತಿರಸ್ಕರಿಸಲಾಗುವುದು.**

**<u>ವಿಶೇಷ ಸೂಚನೆ:</u>** On-line ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ **(Help line) No. 9538791579/7337812816** ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

5. **<u>ಪರೀಕ್ಷಾ ಶುಲ್ಕ</u>:–**

ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ **₹.300/–**ಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳು **₹. 25/–**ನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

6. **<u>ಅರ್ಹತಾ ಷರತ್ತುಗಳು:–</u>**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

7. **ಹುದ್ದೆಗಳ ವರ್ಗೀಕರಣ:–**

ಹುದ್ದೆಗಳ ವರ್ಗೀಕರಣವನ್ನು ಈ ಕೆಳಕಂಡಂತೆ ತೋರಿಸಲಾಗಿದೆ. ಸದರಿ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಗಳಿಗೆ ಸಂಬಂಧಿಸಿದಂತೆ **ಬಿ.ಎಸ್ಸಿ (ಫಾರೆಸ್ಟ್ರಿ) ವಿಷಯದಲ್ಲಿ ಪದವಿ** ಹೊಂದಿದವರಿಂದ ತುಂಬಲು ಮೀಸಲಾದ ಹುದ್ದೆಗಳ ವರ್ಗೀಕರಣ.

**ಮೂಲವೃಂದ**
**10 ಹುದ್ದೆಗಳು**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಒಟ್ಟು |
|---|---|---|---|---|---|
| ಪ.ಜಾ | – | – | 01 | – | 01 |
| ಪ್ರ.2(ಎ) | – | 01 | – | – | 01 |
| ಪ್ರ.2(ಬಿ) | 01 | – | – | – | 01 |
| ಪ್ರ.3(ಎ) | 01 | – | – | – | 01 |
| ಪ್ರ.3(ಬಿ) | 01 | – | – | – | 01 |
| ಸಾ.ಅ | 01 | 01 | 02 | 01 | 05 |
| **ಒಟ್ಟು** | **04** | **02** | **03** | **01** | **10** |

**ಹೈದರಾಬಾದ್–ಕರ್ನಾಟಕ ವೃಂದ**
**03 ಹುದ್ದೆಗಳು**

| ಮೀಸಲಾತಿ | ಇತರೆ | ಒಟ್ಟು |
|---|---|---|
| ಪ.ಜಾ | 01 | 01 |
| ಪ.ಪಂ. | 01 | 01 |
| ಸಾ.ಅ | 01 | 01 |
| **ಒಟ್ಟು** | **03** | **03** |

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಗಳಿಗೆ ಸಂಬಂಧಿಸಿದಂತೆ **ಬಿ.ಎಸ್ಸಿ (ಫಾರೆಸ್ಟ್ರಿ) ವಿಷಯವಲ್ಲದ ವಿಜ್ಞಾನ/ಇಂಜಿನಿಯರಿಂಗ್ ವಿಷಯದಲ್ಲಿ ಪದವಿ** ಹೊಂದಿದವರಿಂದ ತುಂಬಲು ಮೀಸಲಾದ ಹುದ್ದೆಗಳ ವರ್ಗೀಕರಣ.

**ಮೂಲವೃಂದ**
**10 ಹುದ್ದೆಗಳು**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಒಟ್ಟು |
|---|---|---|---|---|---|
| ಪ.ಜಾ | – | – | 01 | – | 01 |
| ಪ್ರ.2(ಎ) | – | 01 | – | – | 01 |
| ಪ್ರ.2(ಬಿ) | 01 | – | – | – | 01 |
| ಪ್ರ.3(ಎ) | 01 | – | – | – | 01 |
| ಪ್ರ.3(ಬಿ) | 01 | – | – | – | 01 |
| ಸಾ.ಅ | 01 | 01 | 02 | 01 | 05 |
| **ಒಟ್ಟು** | **04** | **02** | **03** | **01** | **10** |

**ಹೈದರಾಬಾದ್–ಕರ್ನಾಟಕ ವೃಂದ**
**02 ಹುದ್ದೆಗಳು**

| ಮೀಸಲಾತಿ | ಇತರೆ | ಒಟ್ಟು |
|---|---|---|
| ಪ.ಜಾ | 01 | 01 |
| ಸಾ.ಅ | 01 | 01 |
| **ಒಟ್ಟು** | **02** | **02** |

**8.** (ಅ) **<u>ವೇತನ ಶ್ರೇಣಿ</u>** :– 28100–50100

(ಆ) **<u>ಹುದ್ದೆಗಳ ಕಾಲಾವಧಿ</u>** :– ಆಯ್ಕೆಯಾದ ಅಭ್ಯರ್ಥಿಗಳನ್ನು ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 19ರನ್ವಯ 03 ವರ್ಷದ ಪರೀಕ್ಷಾರ್ಥ ಅವಧಿ ಮೇಲೆ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯಾಗಿ ನೇಮಿಸಿಕೊಂಡು 02 ವರ್ಷದ ಡಿಪ್ಲೋಮಾ ಇನ್ ಫಾರೆಸ್ಟ್ರಿ ತರಬೇತಿಗೆ ನಿಯೋಜಿಸಲಾಗುವುದು. ಈ ತರಬೇತಿಯನ್ನು ಯಶಸ್ವಿಯಾಗಿ ಮುಗಿಸಿದ ನಂತರ ಒಂದು ವರ್ಷ ಕಾರ್ಯ ತರಬೇತಿಗೆ ನೇಮಿಸಲಾಗುವುದು ಹಾಗೂ ಉಳಿದಂತೆ ಕಾಲ ಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು ಸಾಮಾನ್ಯ ನೇಮಕಾತಿ ನಿಯಮಗಳು 1977ರಂತೆ ಇರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳನ್ನು "ಡಿಪ್ಲೋಮಾ ಕೋರ್ಸ್ ಇನ್ ಫಾರೆಸ್ಟ್ರಿ" ಅಧ್ಯಯನಕ್ಕಾಗಿ ರಾಜ್ಯ ಅರಣ್ಯ ಸೇವೆ ತರಬೇತಿ ಕಾಲೇಜಿಗೆ ತರಬೇತಿಗಾಗಿ ಕಳುಹಿಸಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು 2 ವರ್ಷಗಳ ಡಿಪ್ಲೋಮಾ ಇನ್ ಫಾರೆಸ್ಟ್ರಿ ತರಬೇತಿಯನ್ನು ಕೇಂದ್ರ ಸರ್ಕಾರದ Entrance and Training Rules (Revised) 2004ರಂತೆ ಪೂರೈಸಬೇಕಾಗುತ್ತದೆ. ತರಬೇತಿಯನ್ನು ತೃಪ್ತಿಕರವಾಗಿ ಪೂರೈಸಿದ ಅಭ್ಯರ್ಥಿಗಳನ್ನು 2 ವರ್ಷಗಳ ಪರೀಕ್ಷಾರ್ಥ ಅವಧಿಗೆ ಆಯ್ಕೆ ಮಾಡಲಾಗುತ್ತದೆ. ತರಬೇತಿಯನ್ನು ಪರೀಕ್ಷಾರ್ಥಕ ಅವಧಿಯಲ್ಲಿ ತೃಪ್ತಿಕರವಾಗಿ ಪೂರೈಸದ ಅಭ್ಯರ್ಥಿಗಳನ್ನು ಹುದ್ದೆಯಿಂದ ಬಿಡುಗಡೆ ಮಾಡಲಾಗುತ್ತದೆ ಅಲ್ಲದೆ ತರಬೇತಿಗೆ ಸೇರುವಾಗ ಅಭ್ಯರ್ಥಿಗಳು ನೀಡುವ ನಷ್ಟ ಭರ್ತಿ ಬಾಂಡ್(Indemnity bond) ಮೇರೆಗೆ ತರಬೇತಿ ಖರ್ಚನ್ನು ವಸೂಲು ಮಾಡಲಾಗುತ್ತದೆ.

**9. <u>ಶೈಕ್ಷಣಿಕ ವಿದ್ಯಾರ್ಹತೆ ಮತ್ತು ದೇಹದಾರ್ಢ್ಯತೆ</u>:–**

ಅ) ಫಾರೆಸ್ಟ್ರಿ ಪದವೀಧರರಿಗಾಗಿ ಮೀಸಲಿರಿಸಿದ ಹುದ್ದೆಗಳಿಗೆ ಅಭ್ಯರ್ಥಿಗಳು ಫಾರೆಸ್ಟ್ರಿ ವಿಷಯದಲ್ಲಿ ವಿಜ್ಞಾನ ಪದವಿ ಪರೀಕ್ಷೆಯಲ್ಲಿ ಶೇ. 50 ಕ್ಕಿಂತ ಕಡಿಮೆ ಇಲ್ಲದ ಅಂಕ ಪಡೆದು ತೇರ್ಗಡೆ ಆಗಿರಬೇಕು ಹಾಗೂ ಫಾರೆಸ್ಟ್ರಿ ವಿಷಯವಲ್ಲದ ವಿಜ್ಞಾನ ಪದವೀಧರರಿಗೆ ಮೀಸಲಾದ ಹುದ್ದೆಗಳಿಗಾಗಿ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ವಿಶ್ವವಿದ್ಯಾಲಯದ ಕೃಷಿ ಅಥವಾ ತೋಟಗಾರಿಕೆ ಅಥವಾ ಪಶು ವೈದ್ಯ ವಿಜ್ಞಾನ ಪದವಿ ಅಥವಾ ಗಣಿತಶಾಸ್ತ್ರ, ಭೌತಶಾಸ್ತ್ರ, ರಸಾಯನಶಾಸ್ತ್ರ, ಪ್ರಾಣಿಶಾಸ್ತ್ರ, ಸಸ್ಯಶಾಸ್ತ್ರ, ಬಯೋಕೆಮಿಸ್ಟ್ರಿ, ಮೈಕ್ರೋ–ಬಯೋಲಜಿ, ಬಯೋಟೆಕ್ನಾಲಜಿ ವಿಷಯಗಳಲ್ಲಿ 2 ಮತ್ತು ಅದಕ್ಕಿಂತ ಹೆಚ್ಚು ವಿಷಯಗಳೊಡನೆ ಪಡೆದ ವಿಜ್ಞಾನ ಪದವಿ ಪರೀಕ್ಷೆಯಲ್ಲಿ ಶೇ.50ಕ್ಕಿಂತ ಕಡಿಮೆ ಇಲ್ಲದ ಅಂಕ ಪಡೆದು ತೇರ್ಗಡೆ ಆಗಿರಬೇಕು ಅಥವಾ ಇಂಜಿನಿಯರಿಂಗ್‌ನ ಯಾವುದೇ ವಿಭಾಗದ ಪದವಿ ಪರೀಕ್ಷೆಯಲ್ಲಿ ಶೇ.50ಕ್ಕಿಂತ ಕಡಿಮೆ ಇಲ್ಲದ ಅಂಕ ಪಡೆದು ತೇರ್ಗಡೆಯಾಗಿರಬೇಕು.

ಆ) ಈ ಹುದ್ದೆಗಳಿಗೆ ಜಾರಿಗೊಳಿಸಲಾದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ, ನಿರ್ದಿಷ್ಟವಾದ ದೈಹಿಕ ದೇಹದಾರ್ಢ್ಯತೆಯನ್ನು ನಿಗದಿಪಡಿಸಿದ್ದು, ಅಂತಹ ದೇಹ ದಾರ್ಢ್ಯತೆಯನ್ನು ಹೊಂದಿದ್ದಲ್ಲಿ ಮಾತ್ರ ಈ ಹುದ್ದೆಗಳಿಗೆ ನೇಮಕಗೊಳ್ಳಲು ಅಭ್ಯರ್ಥಿಯು ಅರ್ಹತೆ ಪಡೆಯುತ್ತಾನೆ/ತ್ತಾಳೆ. ನಿರ್ದಿಷ್ಟವಾದ ದೈಹಿಕ ದೇಹದಾರ್ಢ್ಯತೆಯನ್ನು ಹೊಂದಿರದ ಯಾವುದೇ ಅಭ್ಯರ್ಥಿಯು ಈ ಹುದ್ದೆಗೆ ಅರ್ಹರಾಗುವುದಿಲ್ಲ.

**10.** (ಎ) **<u>ಶಾರೀರಿಕ ದಾರ್ಢ್ಯತೆಗೆ ಸಂಬಂಧಿಸಿದ ಷರತ್ತುಗಳು</u>:–**

| **ಎತ್ತರ** | | **ಎದೆಯ ಸುತ್ತಳತೆ (ನಿಶ್ವಾಸ ಸ್ಥಿತಿಯಲ್ಲಿ)** | | **ಉಚ್ಛ್ವಾಸ ಸ್ಥಿತಿಯಲ್ಲಿ ವಿಸ್ತರಣೆ** |
|---|---|---|---|---|
| *ಪುರುಷ* | *ಮಹಿಳೆ* | *ಪುರುಷ* | *ಮಹಿಳೆ* | *5 ಸಂ.ಮೀ. (ಪುರುಷ)* |
| *163 ಸಂ.ಮೀ* | *150 ಸಂ.ಮೀ.* | *79 ಸಂ.ಮೀ.* | *74 ಸಂ.ಮೀ.* | *5 ಸಂ.ಮೀ. (ಮಹಿಳೆ)* |

(ಬಿ) <u>ದೃಷ್ಟಿ ಸಾಮರ್ಥ್ಯ</u>:–

| ದೂರದ ದೃಷ್ಟಿ (Distant Vision) | | ಹತ್ತಿರದ ದೃಷ್ಟಿ (Near Vision) | |
|---|---|---|---|
| ದೋಷರಹಿತ ದೃಷ್ಟಿ | ದೋಷಪೂರಿತ ದೃಷ್ಟಿ | ದೋಷರಹಿತ ದೃಷ್ಟಿ | ದೋಷಪೂರಿತ ದೃಷ್ಟಿ |
| 6/6 mtrs | 6/9 mtrs | 0/6 mtrs | 0/8 mtrs |

(Must have the above standard of distant and near vision with or without glasses)

ಪ್ರತಿಯೊಂದು ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ (Colour Blindness), ಮೆಳ್ಳೆಗಣ್ಣು (Squint Eye) ಅಥವಾ ಯಾವುದೇ ಕಣ್ಣಿನ/ರೆಪ್ಪೆಯ ವಿಕೃತ ಸ್ಥಿತಿಯನ್ನು (morbid conditions) ಅನರ್ಹತೆ ಎಂದು ಪರಿಗಣಿಸಲಾಗುವುದು.

(ಸಿ) <u>ಶ್ರವಣ ಸಾಮರ್ಥ್ಯ:–</u>

ಶ್ರವಣ ಪರೀಕ್ಷೆಯಲ್ಲಿನ ರಿನ್ನರ್ಸ್ (Rinner's), ವೆಬ್ಬರ್ಸ್ (Webber's) ಹಾಗೂ ವರ್ಟಿಗೊ (Vertigo) ಪರೀಕ್ಷೆಗಳಲ್ಲಿ ನ್ಯೂನ್ಯತೆ ಕಂಡು ಬಂದಲ್ಲಿ ಅನರ್ಹಗೊಳಿಸಲಾಗುತ್ತದೆ.

(ಡಿ) Knock knees, Bow legs, Flat feet, varicose veins ಇದ್ದಲ್ಲಿ ದೈಹಿಕ ಅಸಾಮರ್ಥ್ಯದ ಕಾರಣದಿಂದ ಅನರ್ಹಗೊಳಿಸಲಾಗುತ್ತದೆ.

(ಇ) ದೈಹಿಕ ಸಹಿಷ್ಣುತೆ ಪರೀಕ್ಷೆಯಲ್ಲಿ ಪುರುಷ ಅಭ್ಯರ್ಥಿಯು 25 ಕಿ.ಮೀ ನಡಿಗೆ ಮತ್ತು ಮಹಿಳಾ ಅಭ್ಯರ್ಥಿಗಳು 16 ಕಿ.ಮೀ ನಡಿಗೆಯನ್ನು 4 ಗಂಟೆ ಅವಧಿಯಲ್ಲಿ ಪೂರೈಸತಕ್ಕದ್ದು.

**<u>ಸೂಚನೆ: ದೇಹಾರೋಗ್ಯ ಪ್ರಮಾಣ ಪತ್ರ: ಅಭ್ಯರ್ಥಿಯು ವೈದ್ಯಕೀಯ ಪ್ರಮಾಣ ಪತ್ರವನ್ನು (Physical Standard) ಸರ್ಕಾರಿ ಸಹಾಯಕ ಶಸ್ತ್ರ ಚಿಕಿತ್ಸಕರಿಗಿಂತ (Assistant Surgeon) ಕಡಿಮೆ ಇಲ್ಲದ ಮೇಲಿನ ದರ್ಜೆಯ ವೈದ್ಯಾಧಿಕಾರಿಯವರಿಂದ (ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ) ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಈ ಪ್ರಮಾಣ ಪತ್ರದ ನಮೂನೆಗಳನ್ನು ಅನುಬಂಧ–1ರಲ್ಲಿ ತೋರಿಸಲಾಗಿದೆ. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ವೈದ್ಯಕೀಯ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.</u>**

**11. <u>ಪರೀಕ್ಷಾ ವಿಧಾನ</u>:–**

**<u>ಸದರಿ ಹುದ್ದೆಗಳ ನೇಮಕಾತಿಯ ಪೂರ್ವಭಾವಿ ಪರೀಕ್ಷೆಯನ್ನು ಆಫ್ ಲೈನ್–ಒಎಂಆರ್ ಮಾದರಿ (Offline-OMR type) ಅಥವಾ ಗಣಕಯಂತ್ರದ ಮೂಲಕ ನೇಮಕಾತಿ ಪರೀಕ್ಷೆ (Computer Based Recruitment Test-CBRT) ಮುಖಾಂತರ ನಡೆಸಲಾಗುವುದು. ಗಣಕಯಂತ್ರದ ಮೂಲಕ ನೇಮಕಾತಿ ಪರೀಕ್ಷೆ (Computer Based Recruitment Test-CBRT) ಯನ್ನು ನಡೆಸಲು ಆಯೋಗದ ತೀರ್ಮಾನವಾದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.</u>**

ಸದರಿ ಹುದ್ದೆಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯು ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) ನಿಯಮಗಳು 2003 ಮತ್ತು ಕರ್ನಾಟಕ ಅರಣ್ಯ ಇಲಾಖೆ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2012 ರಲ್ಲಿ ತಿಳಿಸಿರುವಂತೆ ಎರಡು ಹಂತಗಳನ್ನು ಒಳಗೊಂಡಿರುತ್ತದೆ.

**11.1** <u>ಪೂರ್ವಭಾವಿ ಪರೀಕ್ಷೆ (ಪ್ರಿಲಿಮಿನರಿ ಎಕ್ಸಾಮಿನೇಷನ್)</u>: ಮುಖ್ಯ ಪರೀಕ್ಷೆಗೆ (ಮೈನ್ ಎಕ್ಸಾಮಿನೇಷನ್) 1:10ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆಸುವ ಪರೀಕ್ಷೆ.

**11.2. <u>ಮುಖ್ಯ ಪರೀಕ್ಷೆ (ಮೈನ್ ಎಕ್ಸಾಮಿನೇಷನ್):</u>** (ಲಿಖಿತ ಪರೀಕ್ಷೆ ಮತ್ತು ಶಾರೀರಕ ದಾರ್ಢ್ಯತೆ ಪರೀಕ್ಷೆ ಹಾಗೂ ವ್ಯಕ್ತಿತ್ವ ಪರೀಕ್ಷೆ) ಅರ್ಹತೆಯನುಸಾರ ಅಭ್ಯರ್ಥಿಗಳನ್ನು 1:5ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಆಯ್ಕೆ ಮಾಡುವ ಸಲುವಾಗಿ ನಡೆಸುವ ಪರೀಕ್ಷೆ.

**11.3. <u>ವ್ಯಕ್ತಿತ್ವ ಪರೀಕ್ಷೆ</u>:** ಆಯೋಗವು ನಿಯಮಾನುಸಾರ ನಡೆಸುವ ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳು ಮತ್ತು ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಹುದ್ದೆಗಳ ಅಥವಾ ನೇಮಕಾತಿಗಾಗಿ ಇರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:5ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಪರಿಗಣಿಸಲಾಗುವುದು ವ್ಯಕ್ತಿತ್ವ ಪರೀಕ್ಷೆಗೆ ಗೊತ್ತುಪಡಿಸಿದ ಒಟ್ಟು ಅಂಕಗಳು 20.

**<u>ಅಭ್ಯರ್ಥಿಗಳ ಆಯ್ಕೆಪಟ್ಟಿ:–</u>** ಆಯೋಗವು ಅಭ್ಯರ್ಥಿಗಳು ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯಲ್ಲಿ ಪಡೆದ ಅಂಕಗಳ ಜೇಷ್ಠತೆ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿಯನ್ವಯ ಲಭ್ಯವಿರುವ ಹುದ್ದೆಗಳಿಗೆ ಆಯ್ಕೆ ಮಾಡಲಾಗುವುದು.

**12.1 <u>ಪೂರ್ವಭಾವಿ ಪರೀಕ್ಷೆ:–</u>** ಪೂರ್ವಭಾವಿ ಪರೀಕ್ಷೆಯು ವಸ್ತುನಿಷ್ಠ (ಬಹು ಆಯ್ಕೆ) ಮಾದರಿಯ ಎರಡು ಪತ್ರಿಕೆಗಳನ್ನು ಒಳಗೊಂಡಿರುತ್ತದೆ.

| | | |
|---|---|---|
| ಪತ್ರಿಕೆ–1 | ಸಾಮಾನ್ಯ ಜ್ಞಾನ | 100 ಅಂಕಗಳು |
| ಪತ್ರಿಕೆ–2 | ಆಪ್ಟಿಟ್ಯೂಡ್ ಟೆಸ್ಟ್ | 100 ಅಂಕಗಳು |

**12.2 <u>ಮುಖ್ಯ ಪರೀಕ್ಷೆ</u>:– <u>ಫಾರೆಸ್ಟ್ರಿ ಪದವೀಧರರಿಗೆ</u>** ಕಡ್ಡಾಯ ಕನ್ನಡ, ಕಡ್ಡಾಯ ಇಂಗ್ಲೀಷ್ ಹಾಗೂ ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಎರಡು ಐಚ್ಛಿಕ ವಿಷಯಗಳನ್ನು ಆಯ್ಕೆಮಾಡಿಕೊಳ್ಳಬೇಕಿರುತ್ತದೆ. ಫಾರೆಸ್ಟ್ರಿ ಪತ್ರಿಕೆ–1 ಮತ್ತು ಪತ್ರಿಕೆ–2 ಐಚ್ಛಿಕ ವಿಷಯವನ್ನು ಫಾರೆಸ್ಟ್ರಿ ಪದವೀಧರರು ಮಾತ್ರ ಐಚ್ಛಿಕ ವಿಷಯವನ್ನಾಗಿ ಆಯ್ಕೆ ಮಾಡಿಕೊಳ್ಳುವ ಅವಕಾಶವಿರುತ್ತದೆ

**<u>ಫಾರೆಸ್ಟ್ರಿ ವಿಷಯವಲ್ಲದ ಪದವೀಧರ ಅಭ್ಯರ್ಥಿಗಳು</u>** ಕಡ್ಡಾಯ ಕನ್ನಡ, ಕಡ್ಡಾಯ ಇಂಗ್ಲೀಷ್ ಹಾಗೂ ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ ಎರಡು ಐಚ್ಛಿಕ ವಿಷಯಗಳನ್ನು ಆಯ್ಕೆಮಾಡಿಕೊಳ್ಳಬೇಕಿರುತ್ತದೆ. ಪ್ರತಿ ಪ್ರಶ್ನೆ ಪತ್ರಿಕೆ 100 ಅಂಕಗಳನ್ನು ಒಳಗೊಂಡಿರುತ್ತದೆ.

**<u>ಐಚ್ಛಿಕ ವಿಷಯಗಳು:–</u>**

(i)ಫಾರೆಸ್ಟ್ರಿ ಪತ್ರಿಕೆ–1<br>
(ii)ಫಾರೆಸ್ಟ್ರಿ ಪತ್ರಿಕೆ–2

**(Option to select Forestry Paper-I & II is restricted to B.Sc, (Forestry) graduates only).**

ಅಥವಾ ಈ ಕೆಳಗಿನ ಯಾವುದಾದರೂ ಎರಡು ಪತ್ರಿಕೆಗಳನ್ನು ಆಯ್ಕೆಮಾಡಿಕೊಳ್ಳಬೇಕಿರುತ್ತದೆ.

| *ಕ್ರಮ ಸಂಖ್ಯೆ* | *ಐಚ್ಛಿಕ ವಿಷಯಗಳು* | *ಕ್ರಮ ಸಂಖ್ಯೆ* | *ಐಚ್ಛಿಕ ವಿಷಯಗಳು* |
|---|---|---|---|
| *01* | *Botany* | *05* | *Physics* |
| *02* | *Zoology* | *06* | *Agriculture* |
| *03* | *Mathematics* | *07* | *Civil Engineering* |
| *04* | *Chemistry* | *08* | *Animal Husbandry & Veterinary Science* |

**<u>ಸೂಚನೆ:</u>** ಕಡ್ಡಾಯ ವಿಷಯಗಳಾದ ಕನ್ನಡ, ಇಂಗ್ಲೀಷ್ ಪತ್ರಿಕೆಗಳಲ್ಲಿನ ಅಂಕಗಳು ಅರ್ಹತಾದಾಯಕ ಸ್ವರೂಪದಾಗಿರುತ್ತದೆ. ಈ ಪತ್ರಿಕೆಗಳಲ್ಲಿ ಅರ್ಹತೆ ಗಳಿಸಲು ಪ್ರತಿ ಪತ್ರಿಕೆಯಲ್ಲಿ ಕನಿಷ್ಠ ಶೇ. 35 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಎರಡೂ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಅಭ್ಯರ್ಥಿಗಳ ಆಯ್ಕೆಯ ಅರ್ಹತೆಯನ್ನು ನಿಗದಿಪಡಿಸುವಲ್ಲಿ ಪರಿಗಣಿಸಲಾಗುವುದಿಲ್ಲ. ಎರಡು ಪತ್ರಿಕೆಗಳಲ್ಲಿ ನಿಗದಿತ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಐಚ್ಛಿಕ ವಿಷಯಗಳಲ್ಲಿ ಎಷ್ಟೇ ಹೆಚ್ಚು ಅಂಕಗಳನ್ನು ಗಳಿಸಿದ್ದರೂ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾಗುವುದಿಲ್ಲ ಹಾಗೂ ಇಂತಹ ಅಭ್ಯರ್ಥಿಗಳ ಇತರೆ ವಿಷಯಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ ಅಲ್ಲದೆ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾಗುವುದಿಲ್ಲ. ಅಭ್ಯರ್ಥಿಗಳು ಆಯ್ಕೆಮಾಡಿಕೊಂಡಿರುವ ಎಲ್ಲಾ

ಪತ್ರಿಕೆಗಳಿಗೆ ಕಡ್ಡಾಯವಾಗಿ ಹಾಜರಾಗಬೇಕು. ಯಾವುದೇ ಒಂದು ಪತ್ರಿಕೆಗೆ ಗೈರುಹಾಜರಾದರೂ ಸಹ ಉಳಿದ ಪತ್ರಿಕೆಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ ಹಾಗೂ ಉಳಿದ ಪತ್ರಿಕೆಗಳಲ್ಲಿ ಎಷ್ಟೇ ಅಂಕಗಳನ್ನು ಗಳಿಸಿದ್ದರೂ ಸಹ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾಗುವುದಿಲ್ಲ.

**ಮುಖ್ಯ ಪರೀಕ್ಷೆಯ ಪಠ್ಯಕ್ರಮ (Syllabus) ವನ್ನು ಆಯೋಗದ ವೆಬ್‌ಸೈಟ್ http://kpsc.kar.nic.inನಲ್ಲಿ ಪ್ರಕಟಿಸಲಾಗಿದೆ.**

**12.3 ಪರೀಕ್ಷಾ ಕೇಂದ್ರಗಳು:–**

| | | |
|---|---|---|
| ಬೆಂಗಳೂರು | ಕಲಬುರ್ಗಿ | ಶಿವಮೊಗ್ಗ |
| ಧಾರವಾಡ | ಮೈಸೂರು | ಬೆಳಗಾವಿ |

**13. ವಯೋಮಿತಿ:–** ಅರ್ಜಿಯನ್ನು On-line ಮೂಲಕ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು 18 ವರ್ಷ ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯನ್ನು ಈ ಕೆಳಕಂಡಂತೆ ಮೀರಿರಬಾರದು.

| | |
|---|---|
| ಸಾಮಾನ್ಯ ಅರ್ಹತೆ | 30 ವರ್ಷ |
| ಪ್ರವರ್ಗ– 2ಎ, 2ಬಿ, 3ಎ, 3ಬಿ | 33 ವರ್ಷ |
| ಪ.ಜಾ/ಪ.ಪಂ/ಪ್ರ–1 | 35 ವರ್ಷ |

ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು **ಸಶಸ್ತ್ರ ಕೇಂದ್ರ ದಳದಲ್ಲಿ ಸಲ್ಲಿಸಿದ ಸೇವಾವಧಿ ಜೊತೆಗೆ 03 ವರ್ಷಗಳು.**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ; ಮತ್ತು

ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ಅಂಗವಿಕಲರಾದ ವ್ಯಕ್ತಿಗಳ ಕುಟುಂಬದವರು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಕುಟುಂಬದವರು ಎಂದರೆ ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸಿದ್ದಂತಹ ವ್ಯಕ್ತಿಯ ಮೇಲೆ ಸಂಪೂರ್ಣವಾಗಿ ಅವಲಂಬಿತರಾದ ಅಂದರೆ ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು ಮಾತ್ರ ಅಂತಹ **ಅವಲಂಬಿತ ವ್ಯಕ್ತಿಯು(ಅಭ್ಯರ್ಥಿ) ಮಾಜಿ ಸೈನಿಕ ಮೀಸಲಾತಿ ಕೋರಿದಲ್ಲಿ, ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟಿದ್ದರೆ ಅಥವಾ ಶಾಶ್ವತವಾಗಿ ಅಂಗವಿಕಲರಾಗಿದ್ದರೆ ಈ ಸಂಬಂಧ ಸಕ್ಷಮ ಪ್ರಾಧಿಕಾರ ನೀಡಿರುವ ಪ್ರಮಾಣಪತ್ರವನ್ನು (Defendant Certificate) ಅವಲಂಬಿತ ವ್ಯಕ್ತಿಯು(ಅಭ್ಯರ್ಥಿ) ಹಾಜರುಪಡಿಸತಕ್ಕದ್ದು.** ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

**(ಅ)** ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

**(ಆ)** ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು

**ಅಥವಾ**

**(ಇ)** ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

**ಅಥವಾ**

**(ಈ)** ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು

**ವಿವರಣೆ** (1)–ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

**ವಿವರಣೆ (2)–ಜನ್ಮ ದಿನಾಂಕಕ್ಕಾಗಿ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿ, ಎಸ್.ಎಸ್.ಎಲ್.ಸಿ. ವರ್ಗಾವಣೆ ಪ್ರಮಾಣ ಪತ್ರ (ಟಿ..ಸಿ./ಕ್ಯುಮುಲೇಟಿವ್ ರೆಕಾರ್ಡ್)ದಲ್ಲಿ ನಮೂದಿಸಿರುವಂತೆ ಜನ್ಮ ದಿನಾಂಕವನ್ನು ಆಯೋಗವು ಒಪ್ಪಿಕೊಳ್ಳುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.**

**14. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:–**

ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು:–

| | |
|---|---|
| *ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು* | ***ನಮೂನೆ–ಡಿ*** |
| *ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು* | ***ನಮೂನೆ–ಇ*** |
| *ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು* | ***ನಮೂನೆ–ಎಫ್*** |

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು **ಸಂಬಂಧಿತ ತಹಶೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು, ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್‌ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

ಹಿಂದುಳಿದ ವರ್ಗಗಳ ಪ್ರವರ್ಗ–2(ಎ), ಪ್ರವರ್ಗ–2(ಬಿ), ಪ್ರವರ್ಗ–3(ಎ) ಮತ್ತು ಪ್ರವರ್ಗ–3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು **ಅನುಬಂಧ–1ರಲ್ಲಿ** ತೋರಿಸಲಾಗಿದೆ. **ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.**

**15. ಗ್ರಾಮೀಣ ಅಭ್ಯರ್ಥಿ:–** ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13–02–2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. **ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ**

**ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು**. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ **ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ** ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು) ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು **ಅನುಬಂಧ–1**ರಲ್ಲಿ ತೋರಿಸಲಾಗಿದೆ.

**16. <u>ಕನ್ನಡ ಮಾಧ್ಯಮ ಅಭ್ಯರ್ಥಿ:–</u>** ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24–10–2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ **ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ** ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಗಳನ್ನು **ಅನುಬಂಧ–1**ರಲ್ಲಿ ತೋರಿಸಲಾಗಿದೆ.

**17.1 <u>ಅನುಚ್ಛೇದ 371(ಜೆ)ರನ್ವಯ ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ</u>**

**ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013**ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ (ಹೈದರಾಬಾದ್–ಕರ್ನಾಟಕ) ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ–II ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013, ದಿನಾಂಕ:29–01–2014ರ **ಅನುಬಂಧ–ಎ** ರಲ್ಲಿ (3(3)ನೇ ನಿಯಮ) ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪೂರ್ವಭಾವಿ ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ **ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು**. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುತ್ತದೆ. ಈ ಪ್ರಮಾಣ ಪತ್ರಗಳ ನಮೂನೆಯನ್ನು **ಅನುಬಂಧ–1**ರಲ್ಲಿ ತೋರಿಸಲಾಗಿದೆ. **ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.**

**<u>ಹೈದರಾಬಾದ್–ಕರ್ನಾಟಕ ಮೀಸಲಾತಿ ಕೋರಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಹೈ–ಕ ಪ್ರಮಾಣ ಪತ್ರವನ್ನು ಹೊಂದಿರದ ಅಭ್ಯರ್ಥಿಗಳಿಗೆ ವಿಶೇಷ ಸೂಚನೆ:–</u> ದಿನಾಂಕ:22–05–2015ರ ಸರ್ಕಾರದ ಸುತ್ತೋಲೆಯಲ್ಲಿ ಅರ್ಜಿ ಸಲ್ಲಿಸುವ ಹಂತದಲ್ಲಿ ಅಭ್ಯರ್ಥಿಗಳಿಂದ ತಾವು ಸ್ಥಳೀಯ ವ್ಯಕ್ತಿ ಎಂದು ಕ್ಲೇಮ್ ಮಾಡುವಲ್ಲಿ ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಪಡೆದು, ಅದರ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆಯನ್ನು ಮುಂದುವರೆಸುವುದು ಹಾಗೂ ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಇದಕ್ಕೆ ಸಂಬಂಧಿಸಿದಂತೆ ದಿ:09–09–2015ರ ತಿದ್ದೋಲೆಯಲ್ಲಿ ಈ ಕೆಳಕಂಡಂತೆ ಸ್ಪಷ್ಟೀಕರಣವನ್ನು ನೀಡಲಾಗಿರುತ್ತದೆ.**

**"ಅರ್ಹತಾ ಪ್ರಮಾಣ ಪತ್ರ ಅರ್ಹ ಸ್ಥಳೀಯ ವ್ಯಕ್ತಿಗಳಿಗೆ ಸಾರ್ವಜನಿಕ ಉದ್ಯೋಗ ಆದೇಶದಡಿಯಲ್ಲಿ ಮೀಸಲಾತಿಗೊಳಪಡುವ ಹುದ್ದೆಗಳಿಗೆದುರು ಪರಿಗಣಿಸಲು ಅನುವಾಗುವಂತೆ ನೀಡಲಾಗುವ ದಾಖಲಾತಿಯಾಗಿರುತ್ತದೆ. ಅರ್ಹ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರ ನೀಡುವುದು. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿಯ ಪರಿವೀಕ್ಷಣೆಯ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ ನೀಡತಕ್ಕದ್ದು. <u>ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣೆಯನ್ನು ದಾಖಲಿಸುವುದು."</u>**

**17.2 <u>ಸರ್ಕಾರಿ ಸೇವೆಯಲ್ಲಿರುವ ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:–</u>**

**ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು 2013ಕ್ಕೆ** ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ (ಹೈದರಾಬಾದ್–ಕರ್ನಾಟಕ) ಮೀಸಲಾತಿಯನ್ನು ಕೋರುವ ಸರ್ಕಾರಿ ಸೇವೆಯಲ್ಲಿರುವ ನೌಕರರು ತಮ್ಮ ಸೇವಾ ಪುಸ್ತಕದಲ್ಲಿ (Service Register) ದಿನಾಂಕ:01–01–2013ಕ್ಕಿಂತ ಮುಂಚಿನ ನಮೂದಿನಲ್ಲಿ ಅವರ ಸ್ವಂತ ಊರು ಅಥವಾ ಸ್ಥಳಕ್ಕೆ ಸಂಬಂಧಿಸಿದಂತೆ ಹೈದರಾಬಾದ್–ಕರ್ನಾಟಕ ಪ್ರದೇಶದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ಯಾದಗಿರಿ ಕಂದಾಯ ಜಿಲ್ಲೆಯ ಅಡಿಯಲ್ಲಿ ಬರುವಂತಹ ಪ್ರದೇಶದ ನಮೂದು ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳು ತಮ್ಮ ಕಛೇರಿ ಮುಖ್ಯಸ್ಥರಿಂದ (ನೇಮಕಾತಿ ಪ್ರಾಧಿಕಾರ) ಸರ್ಕಾರದ ಅಧಿಸೂಚನೆ–I ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013, ದಿನಾಂಕ:29–01–2014ರ **ಅನುಬಂಧ–ಎ** ರಲ್ಲಿ (5(2)ನೇ ನಿಯಮ) ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ **ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು**. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುತ್ತದೆ. ಈ ಪ್ರಮಾಣ ಪತ್ರಗಳ ನಮೂನೆಯನ್ನು **ಅನುಬಂಧ–1**ರಲ್ಲಿ ತೋರಿಸಲಾಗಿದೆ. **ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.**

**18. <u>ಸೇವಾನಿರತ ಅಭ್ಯರ್ಥಿ:–</u>** ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 5(4)ರನ್ವಯ "ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇತರೆ ಇಲಾಖೆಯಲ್ಲಿ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ ಇತರ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆಯೇ ಅರ್ಜಿಯನ್ನು ಸಲ್ಲಿಸಿದ್ದರೆ ಆತನು ಸರ್ಕಾರದ ಯಾವುದೇ ಇಲಾಖೆಯಲ್ಲಿನ ಹುದ್ದೆಯ ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ.

ಪರಂತು, ಈ ಉಪ ನಿಯಮವು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕಗೊಂಡಿರುವ ವ್ಯಕ್ತಿಗೆ ಅವನನ್ನು ಎಲ್ಲಿಯವರೆಗೆ ಹಾಗೆಂದು ಪರಿಗಣಿಸಲಾಗುವುದೋ ಅಲ್ಲಿಯವರೆಗೆ ಅನ್ವಯವಾಗತಕ್ಕದ್ದಲ್ಲ".

ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅನುಮತಿಯನ್ನು ಅಂದರೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (**NOC**) ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳ **ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು**. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಾಗ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರುವ ಮೀಸಲಾತಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು(**NOC**) ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಯನ್ನು **ಅನುಬಂಧ–1**ರಲ್ಲಿ ತೋರಿಸಲಾಗಿದೆ.

ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಬೇಕು ಹಾಗೂ ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಅದನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.

**19. ಆಯೋಗದೊಡನೆ ಪತ್ರ ವ್ಯವಹಾರ:–**

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು.

ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒದಗಿಸತಕ್ಕದ್ದು:–

**(i)** ಹುದ್ದೆಯ / ವಿಷಯದ ಹೆಸರು

**(ii)** ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ–ಮೇಲ್ ಐಡಿ

**(iii)** ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

**20. ಪ್ರಾಮುಖ್ಯವಾದ ಸೂಚನೆಗಳು:**

**ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಆಯೋಗವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.**

1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು/ಪದವಿಯ ಘಟಿಕೋತ್ಸವ ಪ್ರಮಾಣ ಪತ್ರ.
2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ (Extract of the Cumulative Record of S.S.L.C.).
3) ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಪೂರ್ಣವಾಗಿ) (Discharge Certificate) ಮತ್ತು ಪೆನ್ಷನ್ ಪಡೆಯುತ್ತಿರುವ ದಾಖಲೆಯ ಪ್ರತಿ/ ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿರುವ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (Dependent Certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).
4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು **ನಮೂನೆ ಡಿ/ಇ/ಎಫ್** ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.(ಮೀಸಲಾತಿ ಕೋರಿದ್ದಲ್ಲಿ)
5) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7) ದೈಹಿಕ ದೇಹದಾರ್ಢ್ಯತಾ ಪ್ರಮಾಣ ಪತ್ರ (Physical Fitness Certificate) ನಿಗದಿತ ನಮೂನೆಯಲ್ಲಿ
8) ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣಪತ್ರ/ಸ್ವಗ್ರಾಮ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
9) ಅಪೂರ್ಣವಾಗಿರುವ, ಫೋಟೋ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದೇ ಇರುವ ಹಾಗೂ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
10) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
11) **ಸೇವೆಯಲ್ಲಿರುವ ಅಭ್ಯರ್ಥಿಗಳು ನಿರಾಕ್ಷೇಪಣಾ (NOC) ಪ್ರಮಾಣ ಪತ್ರವನ್ನು ಕೆ.ಸಿ.ಎಸ್.ಆರ್. ನಿಯಮ 1977ರ ನಿಯಮ 5(4)ರನ್ವಯ ಪಡೆದಿಟ್ಟುಕೊಂಡಿರತಕ್ಕದ್ದು.**

12) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪೂರ್ವಭಾವಿ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಆಯೋಗವು ಪರಿಶೀಲಿಸಿ ಮೇಲ್ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶಪತ್ರಗಳನ್ನು ಆನ್‌ಲೈನ್ ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಲು ಅನುಮತಿಸಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಇಲ್ಲದಿದ್ದಲ್ಲಿ ಅಥವಾ ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

13) ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾದಲ್ಲಿ ತಮ್ಮ ಪೂರ್ವಭಾವಿ ಪರೀಕ್ಷೆಯ ಅರ್ಜಿಯಲ್ಲಿ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಗಳನ್ನು ತಿರಸ್ಕರಿಸಲಾಗುವುದು. ಆದುದರಿಂದ ಪೂರ್ವಭಾವಿ ಪರೀಕ್ಷೆಯ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ನಿಗದಿತ ನಮೂನೆಯಲ್ಲಿ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು (ಮೀಸಲಾತಿ ಕೋರಿರುವ) ಪಡೆದಿಟ್ಟುಕೊಂಡಿದ್ದು, ಸದರಿ ಪ್ರಮಾಣ ಪತ್ರಗಳ ಮೂಲ ದಾಖಲೆಗಳನ್ನು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಜಾರಿಯಾಗಿರುವ ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಂತಹ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಿ, ಅಂತಹ ಮೀಸಲಾತಿಗಳನ್ನು ರದ್ದುಪಡಿಸಲಾಗುವುದು/ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು.

**21. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–**

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | Cat–1 | Category – I |
| 2ಎ | ಪ್ರವರ್ಗ–2ಎ | 2A | Category – 2A |
| 2ಬಿ | ಪ್ರವರ್ಗ–2ಬಿ | 2B | Category – 2B |
| 3ಎ | ಪ್ರವರ್ಗ–3ಎ | 3A | Category – 3A |
| 3ಬಿ | ಪ್ರವರ್ಗ–3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಹೈ.ಕ. | ಹೈದರಾಬಾದ್–ಕರ್ನಾಟಕ ಅಭ್ಯರ್ಥಿ | HK | Hyderabad-Karnataka Candidate |

**22. <u>ವಿಶೇಷ ಸೂಚನೆಗಳು:–</u>**

**(1) ON LINE** ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.

**(2)** ಈಗಾಗಲೇ ಸೇವೆಯಲ್ಲಿರುವ/ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಬಂಧದಲ್ಲಿ ತೋರಿಸಿರುವ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು.

**(3) <u>ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:</u>**

| | | |
|---|---|---|
| ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ | : | 080–30574957/ 30574901 |
| ಪ್ರಾಂತೀಯ ಕಛೇರಿ ಮೈಸೂರು | : | 0821–2545956 |
| ಪ್ರಾಂತೀಯ ಕಛೇರಿ ಬೆಳಗಾವಿ | : | 0831–2475345 |
| ಪ್ರಾಂತೀಯ ಕಛೇರಿ ಗುಲ್ಬರ್ಗಾ | : | 08472–227944 |
| ಪ್ರಾಂತೀಯ ಕಛೇರಿ ಶಿವಮೊಗ್ಗ | : | 08182–228099 |

**23. ದುರ್ನಡತೆ:–** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**(ಮನೋಜ್ ಕುಮಾರ್ ಮೀನಾ)**
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

# ಅನುಬಂಧ–1

## (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ–ಡಿ

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ............................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................ ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ *........................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ...................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ........................................................... ಜಿಲ್ಲಾ/ವಿಭಾಗದ ......................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.......................................................

ತಹಶೀಲ್ದಾರ್.........................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

**ರಾಜ್ಯ /ಕೇಂದ್ರಾಡಳಿತ ಪ್ರದೇಶ ***

*** ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

**ಸೂಚನೆ:** ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ–ಇ**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ಜಾತಿಯ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:
ದಿನಾಂಕ :

ತಹಶೀಲ್ದಾರ್
-------------ತಾಲ್ಲೂಕು
ಕಛೇರಿಯ ಮೊಹರು

---

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಮಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

***ಅಥವಾ***

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

***ಅಥವಾ***

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

***ಅಥವಾ***

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎರಡು ಲಕ್ಷಮೀರುವುದಿಲ್ಲವೆಂದು;

***ಅಥವಾ***

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ ಇವರು ಜಾತಿಗೆ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ :
ದಿನಾಂಕ:

ತಹಶೀಲ್ದಾರ್
-----------ತಾಲ್ಲೂಕು
ಕಛೇರಿಯ ಮೊಹರು

**<u>ಸೂಚನೆ</u>:– 1) ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿನಾಂಕ:04–06–2015ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2(ಎ), 2(ಬಿ), 3(ಎ) ಮತ್ತು 3(ಬಿ) ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ–ತಾಯಿ, ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ. 4.50 ಲಕ್ಷಗಳಿಂದ ರೂ. 6.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ ಮೀಸಲಾತಿ ಪ್ರಮಾಣ ಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ:04–06–2015ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.**

**(2) ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆಯುವಂತೆ ಸೂಚಿಸಿದೆ.**

## ನಮೂನೆ–1

### ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

ತಹಶೀಲ್ದಾರರು
ತಾಲ್ಲೂಕು
ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ಎಂಬುವವರ ಮಗ / ಮಗಳು / ಪತಿ / ಪತ್ನಿ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)

5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)

6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ
ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ಸ್ಥಳ: ತಂದೆ/ತಾಯಿ/ಪೋಷಕರ ಸಹಿ
ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ಎಂಬುವವರು ಕರ್ನಾಟಕ ರಾಜ್ಯದ ಜಿಲ್ಲೆಯ ವಿಭಾಗ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

**ಸ್ಥಳ :** **ತಹಶೀಲ್ದಾರ್**
**ದಿನಾಂಕ:** **ತಾಲ್ಲೂಕು**
**ಕಛೇರಿಯ ಮೊಹರು**

| |
|---|
| **ಸೂಚನೆ–1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.** |
| **ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು** |

## ನಮೂನೆ–2

### *ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ*

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

**ಮೇಲು ರುಜು** **ಸಹಿ**

**ಕ್ಷೇತ್ರ ಶಿಕ್ಷಣ ಅಧಿಕಾರಿ** **ಮುಖ್ಯೋಪಾಧ್ಯಾಯರ ಸಹಿ**

**ಕಛೇರಿಯ ಮೊಹರು** **ಮತ್ತು ಸಂಸ್ಥೆಯ ಮೊಹರು**

**ಸ್ಥಳ :**

**ದಿನಾಂಕ:**

---

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

**ಸ್ಥಳ:**

**ದಿನಾಂಕ:** **ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು**

---

**ಅನುಬಂಧ–ಎ.**

**ಅರ್ಹತಾ ಪ್ರಮಾಣ ಪತ್ರ**
**(ಅನುಚ್ಛೇದ 371(ಜೆ) ಮೇರೆಗೆ)**
**(3)(3)ನೇ ನಿಯಮ ನೋಡಿ)**

(ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ/ಶ್ರೀಮತಿ____________________ರವರು________________

ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ __________ಜಿಲ್ಲೆಯ __________

ತಾಲ್ಲೂಕಿನ

____________________ಗ್ರಾಮ/ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ:____________

ದಿನಾಂಕ:__________

ಹೆಸರು________________

ಅಸಿಸ್ಟೆಂಟ್ ಕಮೀಷನರ್

______________ಉಪ ವಿಭಾಗ

______________ಜಿಲ್ಲೆ.

---

***ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದರಾಬಾದ್–ಕರ್ನಾಟಕ ಮೀಸಲಾತಿಗೆ ಸಲ್ಲಿಸಬೇಕಾದ ಪ್ರಮಾಣ ಪತ್ರ***

**ಅನುಬಂಧ–ಎ.**

**ಸ್ವಗ್ರಾಮ ಪ್ರಮಾಣ ಪತ್ರ**
**(ಅನುಚ್ಛೇದ 371(ಜೆ) ಮೇರೆಗೆ)**
(5(2)ನೇ ನಿಯಮ ನೋಡಿ)

(ಪ್ರಮಾಣ ಪತ್ರ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ/ಶ್ರೀಮತಿ____________________ರವರು________________

ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ __________ಜಿಲ್ಲೆಯ __________

ತಾಲ್ಲೂಕಿನ ____________________ಗ್ರಾಮ/ಪಟ್ಟಣವನ್ನು ತನ್ನ ಸೇವಾ ಪುಸ್ತಕದಲ್ಲಿ ತನ್ನ ಸ್ವಗ್ರಾಮ/ಸ್ಥಳ ಎಂದು ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು ದಿನಾಂಕ: 01–01–2013ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ಇತ್ತೆಂದು ಸ್ವತಃ ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ:
ದಿನಾಂಕ:

ನೇಮಕಾತಿ ಪ್ರಾಧಿಕಾರಿಯವರ ಸಹಿ
ಹೆಸರು:
ಪದನಾಮ:
ಕಛೇರಿ ಮೊಹರು:
ಇಲಾಖೆ:

**<u>ರಾಜ್ಯ ಹಾಗೂ ಕೇಂದ್ರ ಸರ್ಕಾರಿ ನೌಕರರು ಸಲ್ಲಿಸಬೇಕಾದ ನಿರಾಕ್ಷೇಪಣ ಪ್ರಮಾಣ ಪತ್ರ</u>**

ಶ್ರೀ/ಶ್ರೀಮತಿ.................................................................ಆದ ಇವರು ರಾಜ್ಯ/ಕೇಂದ್ರ ಸರ್ಕಾರದಲ್ಲಿ ............................................(ಪದನಾಮ)..............................................ಇಲಾಖೆಯಲ್ಲಿ ಖಾಯಂ/ತಾತ್ಕಾಲಿಕ ಹುದ್ದೆಯನ್ನು ದಿನಾಂಕ:.............................. ರಿಂದ ...................................ರವರೆಗೆ ಹೊಂದಿರುವರು. ಇವರು ಕರ್ನಾಟಕ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡಿದೆ.

**ನೇಮಕಾತಿ ಪ್ರಾಧಿಕಾರಿಯವರ ಸಹಿ ಮತ್ತು ಮೊಹರು**

**ದಿನಾಂಕ:**
**ಸ್ಥಳ:**

**<u>CERTIFICATE TO BE FURNISHED BY THE STATE/CENTRAL GOVT SERVANTS</u>**

**Certified that Sri/Smt…………………………………………………………..……….holds a permanent/temporary post under the State/Central Govt as ………………………… (Designation) in the Dept. of …………………………………………….. from ……………………… to …………………… He/She is permitted to apply for the post of Assistatnt Conservator of Forests in the Department of Karnataka Forest,Ecology and Environment.**

**Signature of the Appointment Authority with Seal**

**Date:**
**Place:**

# Physical Fitness Certificate

## *For the post of Assistant Conservator of Forests*

**(Issued by the Govt. Medical Officer not below the rank of Assistant Surgeon)**

**I do hereby certify that I have examined Sri/Smt.............................................................. and noted the result of the examination as under:**

**1. For Men and Women :-**

**a) Height (cms) :**

**b) Chest girth (cms)**

**i. Minimum Exhalation :**

**ii.Minimum Expansion on Inhalation :**

**2. For men and Women**

**(i) Distant Vision:**

**(ii) Near Vision :**

**Each eye must have full field vision. Colour blindness squint or any morbid conditions of the eyes or lids of either eye shall be disqualification.**

**3. Hearing**

**(i) Rinner's Test:**

**(ii) Webber's Test:**

**(iii) Tests for vertigo:**

**Any defect observed during the test mentioned above shall be a disqualification.**

**4. Anyone of the following shall also be physical disqualifications:-**

**(i) Knock-knees:**

**(ii) Bow legs:**

**(iii) Flat feet:**

**(iv) Varicose veins:**

***I certify that Sri/Smt.............................................................................. is free from all congenital diseases and or deformities .***

| | |
|---|---|
| **Place:** | **Signature of the Doctor:** |
| **Date:** | **Name:** |
| | **K.M.C.Registration No.** |
| | **Designation:** |
| | **Seal** |

**CAUTION NOTE: If this certificate is found to be false, the issuing authority is liable for criminal action against him/her.**